ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಲಯ, ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : **37/2024**

ಚಾ.ಸಾ. :**-2**
ಪ್ರಾ.ಸಾ. :**-2**

| | |
|---|---|
| ಹೆಸರು | : ಶೇಖರ |
| ತಂದೆಯ ಹೆಸರು | : ಸದಾಶಿವಯ್ಯ |
| ವಯಸ್ಸು | : 55 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಪಾಲಹಳ್ಳಿ |

---

ಪ್ರಮಾಣೀಕರಿಸಲಾದ ದಿನಾಂಕಃ- **09.06.2026**

<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>

ಮೃತ ಪುಟ್ಟಸ್ವಾಮಿ ನಮ್ಮ ಊರಿನವರು. ಸುಮಾರು 2 ವರ್ಷಗಳ ಹಿಂದೆ ಸದರಿಯವರಿಗೆ ರಸ್ತೆ ಅಪಘಾತವಾಗಿರುತ್ತದೆ. ಅಪಘಾತವಾದ ಸಮಯದಲ್ಲಿ ನಾನು ದೇವಸ್ಥಾನದ ಬಳಿ ಇದ್ದೆ. ಅಪಘಾತವನ್ನು ನಾನು ನೇರವಾಗಿ ನೋಡಿರುವುದಿಲ್ಲ. ಅಪಘಾತವಾದ ನಂತರ ಮಾರನೇ ದಿವಸ ನನಗೆ ಅಪಘಾತದ ಬಗ್ಗೆ ಗೊತ್ತಾಗಿರುತ್ತದೆ. ಅಪಘಾತವು ಹೇಗೆ, ಯಾವ ರೀತಿ ಹಾಗೂ ಯಾರ ನಿರ್ಲಕ್ಷ್ಯತನದಿಂದ ಉಂಟಾಗಿರುತ್ತದೆ ಎಂಬುದು ನನಗೆ ಗೊತ್ತಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗ ನಿಪಿ**-2** ಎಂದು, ಸಾಕ್ಷಿಯ ಸಹಿಯನ್ನು ನಿಪಿ**-2(**ಎ**)** ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾ

ರು ಮಾಡಿರುತ್ತಾರೆ. ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಈಗ ನಿಪಿ-3 ಎಂದು ಗುರುತಿಸಲಾಯಿತು.

ಅದೇ ದಿನ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು **ನಿಪಿ-4** ಎಂದು, ಸಾಕ್ಷಿಯ ಸಹಿಯನ್ನು **ನಿಪಿ-4(ಎ)** ಎಂದು ಗುರುತಿಸಲಾಯಿತು. ಬಸ್ಸಿನ 2 ಫೋಟೋಗಳನ್ನು ಈಗ ನೋಡುತ್ತಿದ್ದು, ಸದರಿ ಬಸ್ಸನ್ನು ಆ ದಿನ ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸುಳ್ಳು.

*(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)*

<u>ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :</u>

ದಿನಾಂಕಃ 19.05.2024 ರಂದು ರಾತ್ರಿ 9.45 ರ ಸಮಯದಲ್ಲಿ ನಾನು, ಚಾ.ಸಾ-1, 3 ರವರು ನಮ್ಮ ಊರಿನ ಬಸ್ ಸ್ಟಾಂಡ್ ಬಳಿ ನಿಂತುಕೊಂಡು ಮಾತನಾಡುತ್ತಿದ್ದೆವು ಎಂದರೆ ಸುಳ್ಳು. ಆ ಸಮಯದಲ್ಲಿ ಈ ದಿನ ನ್ಯಾಯಾಲಯದ ಮುಂದಿರುವ ಆರೋಪಿ ಬಸ್ಸನ್ನು ನಿಲ್ದಾಣದ ಬಳಿ ನಿಲ್ಲಿಸಿರುತ್ತಾರೆ ಎಂದರೆ ನಾನು ನೋಡಿಲ್ಲ. ನಂತರ ಪುಟ್ಟಸ್ವಾಮಿರವರು ಬಸ್ಸಿನಿಂದ ಇಳಿಯುತ್ತಿದ್ದಾಗ ಆರೋಪಿ ಇದ್ದಕ್ಕಿದ್ದಂತೆ ಬಸ್ಸನ್ನು ಚಾಲನೆ ಮಾಡಿದ್ದು ಆಗ ಪುಟ್ಟಸ್ವಾಮಿ ಬಸ್ಸಿನಿಂದ ಕೆಳಗೆ ಬಿದ್ದು ಬಸ್ಸಿನ ಚಕ್ರ ಅವರ ಮೇಲೆ ಹರಿದು ಮೃತಪಟ್ಟಿರುತ್ತಾರೆ ಎಂದರೆ ಗೊತ್ತಿಲ್ಲ. ಆರೋಪಿಯ ಅಜಾಗರೂಕತೆಯಿಂದ ಸದರಿ ಅಪಘಾತವಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ.

ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಯ ಸಂಪೂರ್ಣ ಭಾಗ "ನಾನು ಮೇಲಿನ ವಿಳಾಸದಲ್ಲಿ .........ನೀಡಿರುತ್ತೇನೆ" ಇದನ್ನು ಸಂಪೂರ್ಣವಾಗಿ ಸಾಕ್ಷಿಯವರಿಗೆ ಓದಿ ಹೇಳಲಾಗಿ

ಸಾಕ್ಷಿಯು ಸದರಿ ಹೇಳಿಕೆಯನ್ನು ಪೊಲೀಸರಿಗೆ ನೀಡಿರುವುದಿಲ್ಲ ಎಂದು ನಿರಾಕರಿಸಿದ ಮೇರೆಗೆ ಸದರಿ ಹೇಳಿಕೆಯನ್ನು ನಿಪಿ-**5** ಎಂದು ಗುರುತಿಸಲಾಯಿತು.

ಪೊಲೀಸರು ನನ್ನ ಸಮಕ್ಷಮ ಪೊಲೀಸ್ ಠಾಣಾ ಆವರಣದಲ್ಲಿ ಸದರಿ ಮಹಜರ್ ಬರೆದಿದ್ದು, ಆ ಸಮಯದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ ಬಸ್ಸನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-4 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುತ್ತದೆ ಹಾಗೂ ಓದಿ ನೋಡಿಯೇ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**